ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 ಕರ್ನಾಟಕ ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 1/10/2020

# ಶಾಸಕ ಮುನೇನಕೊಪ್ಪಗೆ ಕೊರೋನಾ ಸೋಂಕು

ಹುಬ್ಬಳ್ಳಿ: ನವಲಗುಂದ ಶಾಸಕ ಶಂಕರ ಪಾಟೀಲ ಮುನೇನಕೊಪ್ಪ ಅವರಿಗೆ ಕೊರೋನಾ ದೃಢಪಟ್ಟಿದ್ದು ಬೆಂಗಳೂರಿನಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ. ಈ ವಿಷಯವನ್ನು ಬುಧವಾರದಂದು ಅವರೇ ತಮ್ಮ ಫೇಸ್‌ಬುಕ್ ಮೂಲಕ ಖಚಿತ ಪಡಿಸಿದ್ದಾರೆ. ತಮಗೆ ಬೆಳಗ್ಗೆ ಆರೋಗ್ಯದಲ್ಲಿ ಕೊಂಚ ವ್ಯತ್ಯಾಸವಾಗಿದ್ದರಿಂದ ಅಪೋಲೋ ಆಸ್ಪತ್ರೆಯಲ್ಲಿ ತಪಾಸಣೆ ಮಾಡಿಸಿದಾಗ ಪಾಸಿಟಿವ್ ಬಂದಿದೆ. ಯಾವುದೇ ಸಮಸ್ಯೆಯಿಲ್ಲ ಎಂದು ವೈದ್ಯರು ತಿಳಿಸಿದ್ದು, ಅವರ ಸಲಹೆಯಂತೆ ವಿಶ್ರಾಂತಿ ಪಡೆಯುತ್ತಿದ್ದೇನೆ. ನಾಲ್ಕೈದು ದಿನಗಳಿಂದ ತನ್ನ ಸಂಪರ್ಕಕ್ಕೆ ಬಂದಿರುವವರು ಕೊರೋನಾ ಟೆಸ್ಟ್ ಮಾಡಿಸಿಕೊಳ್ಳಬೇಕೆಂದು ಮನವಿ ಮಾಡಿದ್ದಾರೆ. ಇದೇ ವೇಳೆ ಕ್ಷೇತ್ರದ ಜನತೆ ತಮ್ಮ ಯಾವುದೇ ಸಮಸ್ಯೆಗೂ ತಮ್ಮನ್ನು ಮೊಬೈಲ್ ಮೂಲಕ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

